**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ**

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

---

ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21 ದಿನಾಂಕ : 25/03/2021

## ವಾರ್ಡ್-130ರ ವಾರ್ಡ್ ಸಭೆಯ ನಡವಳಿ.

ದಿನಾಂಕ: 25/03/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು<br>ನೋಡಲ್ ಅಧಿಕಾರಿ |
| 2 | ಶ್ರೀ ಕೆ.ಎಂ. ಯಧುಕೃಷ್ಣ | ಸಹಾಯಕ ಇಂಜಿನಿಯರ್<br>ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀ. ಡಿ. ವಿನಯ್ | ಕಿರಿಯ ಆರೋಗ್ಯ ಪರಿವೀಕ್ಷಕರು<br>ಬಿ.ಬಿ.ಎಂ.ಪಿ |
| 4 | ಶ್ರೀಮತಿ ರೂಪ.ಎಂ | ಸಹಾಯಕ ಇಂಜಿನಿಯರ್<br>ಬೆಸ್ಕಾಂ, ಆರ್.ಆರ್. ಬಡಾವಣೆ |
| 5 | ಶ್ರೀ ಶರಣಪ್ಪ ಅಂಗಡಿ | ವಾರ್ಡ್ ಕಮಿಟಿ ಸದಸ್ಯರು |
| 6 | ಶ್ರೀ ರಾಮಣ್ಣ | ವಾರ್ಡ್ ಕಮಿಟಿ ಸದಸ್ಯರು |
| 7 | ಶ್ರೀ ಟಿ.ಜಯರಾಂ | ವಾರ್ಡ್ ಕಮಿಟಿ ಸದಸ್ಯರು |
| 9 | ಶ್ರೀಮತಿ ಸಬೀಹಾ ಅಂಜುಮ್ | ವಾರ್ಡ್ ಕಮಿಟಿ ಸದಸ್ಯರು |
| 11 | ಶ್ರೀ ಶಶಿಕುಮಾರ್ | ವಾರ್ಡ್ ಕಮಿಟಿ ಸದಸ್ಯರು |
| 12 | ಶ್ರೀ ಎನ್. ಕದರಪ್ಪ | ವಾರ್ಡ್ ಕಮಿಟಿ ಸದಸ್ಯರು |
| 13 | ಶ್ರೀ ಜಗದೀಶ್ | ವಾರ್ಡ್ ಕಮಿಟಿ ಸದಸ್ಯರು |
| 14 | ಶ್ರೀಮತಿ ಪ್ರೇಮ | ವಾರ್ಡ್ ಕಮಿಟಿ ಸದಸ್ಯರು |
| 18 | ರಾಮು ಕೆ | ಎಲೆಕ್ಟ್ರಿಕಲ್ ಗುತ್ತಿಗೆದಾರರು |

Scanned with CamScanner

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

(1) ವಾರ್ಡ್ ಸಂಖ್ಯೆ:- 130ರ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಬೀದಿ ದೀಪಗಳನ್ನು ಸರಿಪಡಿಸಲು ಸಾರ್ವಜನಿಕರು ಸಭೆಯಲ್ಲಿ ಕೋರಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಗಳು ಎಲೆಕ್ಟ್ರಿಕಲ್ ಗುತ್ತಿಗೆದಾರರಾದ ಶ್ರೀ ಜಯರಾಂ ರವರೊಂದಿಗೆ ಮಾತನಾಡಿ ತುರ್ತಾಗಿ ವಿದ್ಯುತ್ ಬೀದಿ ದೀಪಗಳನ್ನು ಸರಿಪಡಿಸಲು ಸೂಚಿಸಿದರು.

(2) ವಾರ್ಡ್ ಸಂಖ್ಯೆ:- 130ರ ವ್ಯಾಪ್ತಿಯಲ್ಲಿನ ಅನ್ನಪೂರ್ಣೇಶ್ವರಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಾಗಿ ಅಲ್ಲಿನ ಸ್ಥಳಿಯ ನಿವಾಸಿಗಳು ಸಭೆಯಲ್ಲಿ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಅನ್ನಪೂರ್ಣೇಶ್ವರಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದನ್ನು ತ್ವರಿತವಾಗಿ ಬಗೆಹರಿಸುವಂತೆ ತಿಳಿಸಲಾಗಿ, ಸಂಬಂಧಿಸಿದ ಅಧಿಕಾರಿಗಳಿಗೆ ಪತ್ರ ಬರೆಯಲು ತಿಳಿಸಿದರು. ಶ್ರೀ ಚಿತ್ತಪ್ಪ, ನೀರುಗಂಟಿ (ವಾರ್‌ಮನ್) ರವರು ಸ್ಥಳೀಯ ನಾಗರೀಕರೊಡನೆ ಅನುಚಿತವಾಗಿ ವರ್ತಿಸುತ್ತಿರುವ ಬಗ್ಗೆ ಇರುವ ದೂರಿಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಯವರು ಸದರಿ ನೀರುಗಂಟಿಯ ಬಗ್ಗೆ ಕ್ರಮತೆಗೆದುಕೊಳ್ಳಲು ವಾರ್ಡ್‌ನ ಬಿ.ಡಬ್ಲೂ.ಎಸ್.ಎಸ್.ಬಿ. ಸಹಾಯಕ ಅಭಿಯಂತರರಿಗೆ ತಿಳಿಸಿರುತ್ತಾರೆ.

(3) ವಾರ್ಡ್ ಸಂಖ್ಯೆ 130ರ ವ್ಯಾಪ್ತಿಯಲ್ಲಿ ಸಿಎಂಸಿ ನೀರನ್ನು ಸಮರ್ಪಕವಾಗಿ ಪೂರೈಸಲು ಶ್ರೀ ರವಿಚಂದ್ರ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

(4) ವಾರ್ಡ್ ಸಂಖ್ಯೆ:- 130ರ ವ್ಯಾಪ್ತಿಯಲ್ಲಿನ ಕೆರೆಗಳನ್ನು ಒತ್ತುವರಿ ಮಾಡಿ ಅನಧಿಕೃತ ಕಟ್ಟಡವನ್ನು ನಿರ್ಮಿಸುತ್ತಿದ್ದಾರೆಂದು ಶ್ರೀ ಎನ್. ಕದರಪ್ಪರ, ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್ ನಂ.130ರ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಒತ್ತುವರಿ ಮಾಡಿ ಅನಧಿಕೃತವಾಗಿ ಕಟ್ಟಡಗಳನ್ನು ಕಟ್ಟುತ್ತಿರುವ ಬಗ್ಗೆ ಸಂಬಂಧಿಸಿದ ಪೊಲೀಸ್ ಠಾಣೆಗೆ ದೂರು ನೀಡುವಂತೆ ಪತ್ರದ ಮುಖೇನ ಸಹಾಯಕ ಕಾರ್ಯಪಾಲಕ

Scanned with CamScanner

ಅಭಿಯಂತರರು, ಕೆರೆಗಳ ವಿಭಾಗ ರವರಿಗೆ ತಿಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

(5) ವಾರ್ಡ್ ನಂ.130ರ ವ್ಯಾಪ್ತಿಯಲ್ಲಿ ಕೆರೆಯ ಅಚ್ಚುಕಟ್ಟು ಪ್ರದೇಶಕ್ಕೆ ಸೇರಿದ ವಲಯದ ಪಕ್ಕದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಅಳವಡಿಸಿರುವ ಕೊಳವೆಯನ್ನು ತೆರವುಗೊಳಿಸುವಂತೆ ಪ್ರಾಜೆಕ್ಟ್–ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರಿಗೆ ಪತ್ರ ಬರೆಯಲು ತಿಳಿಸಲಾಯಿತು.

(6) ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿಲ್ಲವೆಂದು ಸ್ಥಳೀಯರು ಮೌಖಿಕವಾಗಿ ಸಭೆಯಲ್ಲಿ ತಿಳಿಸಿರುವ ಬಗ್ಗೆ ನೋಡಲ್ ಅಧಿಕಾರಿಯವರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಸುವಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಡಿ. ವಿನಯ್ ರವರಿಗೆ ಸೂಚಿಸಿದರು.

(7) ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವ ಬಗ್ಗೆ ಸ್ಥಳೀಯ ಸಾರ್ವಜನಿಕರು ಸಭೆಯಲ್ಲಿ ಮೌಖಿಕವಾಗಿ ದೂರು ನೀಡಿರುವುದರಿಂದ, ಮುಂದಿನ ಸಭೆಗೆ ಪಶು ಸಂಗೋಪನಾ ಅಧಿಕಾರಿಯವರು ತಪ್ಪದೇ ಹಾಜರಾಗಲು ಪತ್ರದ ಮುಖೇನ ಸೂಚಿಸುವಂತೆ ನೋಡಲ್ ಅಧಿಕಾರಿಯವರು ಸಭೆಯಲ್ಲಿ ಕಾರ್ಯದರ್ಶಿಯವರಿಗೆ ತಿಳಿಸಿದರು.

(8) ವಾರ್ಡ್ ಕಮಿಟಿಯ ಸದಸ್ಯರಾದ ಶ್ರೀಮತಿ ಪ್ರೇಮ ನಾಗಯ್ಯ ರವರು ಚರಂಡಿಯ ಕವರಿಂಗ್ ಸ್ಲ್ಯಾಬ್‌ಗಳನ್ನು ಗೊಲ್ಲರಹಟ್ಟಿಯಲ್ಲಿ ಬಾಕಿ ಇರುವ ಚರಂಡಿಯ ಉದ್ದಕ್ಕೂ ಅಳವಡಿಸುವಂತೆ ಸಭೆಯಲ್ಲಿ ಕೋರಿರುತ್ತಾರೆ. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

(9) ಹಕ್ಕಿ ಪಿಕ್ಕಿ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯು ಅಧಿಕವಾಗಿರುವುದರಿಂದ, ಸದರಿ ಪ್ರದೇಶದ ಜನರಿಗೆ ಕುಡಿಯುವ ನೀರನ್ನು ಒದಗಿಸಲು ಅನುದಾನದ ಲಭ್ಯತೆಗೆ ಅನುಗುಣವಾಗಿ ಹೊಸದಾಗಿ ಕೊಳವೆ ಬಾವಿಗಳನ್ನು ಕೊರೆದು ನೀರು ಪೂರೈಸುವ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

(10) ವಾರ್ಡ್ ನಂ.130ರ ವ್ಯಾಪ್ತಿಯಲ್ಲಿ ಬರುವ ಶಿರ್ಕೆ ಪೆಟ್ರೋಲ್ ಬಂಕ್ ಹಾಗೂ ವಿಜಯ್ ವಾಟರ್ ಸರ್ವೀಸ್ ಪಕ್ಕ ರಸ್ತೆ ಅಪಘಾತಗಳು ಆಗದಂತೆ ತಡೆಯುವ ಸಲುವಾಗಿ ತಡೆಗೋಡೆಗಳನ್ನು ನಿರ್ಮಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆಯಲು ಸಭೆಯಲ್ಲಿ

Scanned with CamScanner

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರಗಳ ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

<u>ಪ್ರತಿಯನ್ನು:</u>

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ

Scanned with CamScanner